# <u>ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ನಡವಳಿಗಳು</u>

ವಿಷಯ: Novel Coronavirus (COVID-19) ನ ವೈರಸ್ ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ:
1. ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:13-03-2020 ರಂದು ನಡೆದ ಸಭೆಯ ನಡವಳಿ.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಆದೇಶ ಸಂಖ್ಯೆ:ಡಿಡಿ/ಎಸ್ಎಸ್‌ಯು/ಕೋವಿಡ್-19/17/19-2020, ದಿನಾಂಕ:13-03-2020.

*******

**<u>ಪ್ರಸ್ತಾವನೆ,</u>**

ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:13-03-2020 ರಂದು ಕೊರೊನಾ ವೈರಸ್ ನಿಯಂತ್ರಣ ಕುರಿತು ಜರುಗಿದ ಸಭೆಯಲ್ಲಿ Novel Coronavirus (COVID-19) ನ ವೈರಸ್ ತಡೆಗಟ್ಟುವ ಹಾಗೂ ಕಣ್ಗಾವಲು ಕ್ರಮಗಳನ್ನು ವಹಿಸುವ ಕುರಿತು ಸುಧೀರ್ಘವಾಗಿ ಚರ್ಚಿಸಿ ಕೆಲವು ನಿರ್ಧಾರಗಳನ್ನು ಜಾರಿಗೆ ತರಲು ತೀರ್ಮಾನಿಸಲಾಗಿರುತ್ತದೆ. ಸದರಿ ತೀರ್ಮಾನಗಳಲ್ಲಿ ಅಬಕಾರಿ ಇಲಾಖೆಗೆ ಸಂಬಂಧಿಸಿದಂತೆ ಪಬ್‌ಗಳು, ಕ್ಲಬ್‌ಗಳು, ಹಾಗೂ ಹೆಚ್ಚಿನ ಜನರು ಸೇರುವ ಕಾರ್ಯಕ್ರಮಗಳನ್ನು ನಡೆಸದಿರುವುದು ಸಹ ತೀರ್ಮಾನಿಸಲಾಗಿರುತ್ತದೆ. ಸದರಿ ನಿರ್ಣಯಗಳನ್ನು ಕಾರ್ಯಗತಗೊಳಿಸಲು ಎಲ್ಲಾ ಇಲಾಖೆಗಳು ಸಂಪೂರ್ಣ ಸಹಕಾರ ನೀಡಲು ಸೂಚಿಸಲಾಗಿರುತ್ತದೆ. ಸದರಿ ಸೂಚನೆಯನ್ನು ಕಾರ್ಯೋನ್ಮುಖಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ 1965 ಕಲಂ 21 (1) ಮತ್ತು 3 (2) ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶ ನೀಡಲಾಗಿದೆ.

## <u>ಆದೇಶ ಸಂಖ್ಯೆ:ಇಸಿಇ/04/ಜಿ.ಕ್ರೈಂ/2019-20, ದಿನಾಂಕ:14-03-2020</u>

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಯಶವಂತ.ವಿ, ಭಾ.ಆ.ಸೇ., ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 21 (1) ಮತ್ತು 3 (2) ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಉಪಯೋಗಿಸಿ **ದಿನಾಂಕ:14-03-2020** ರ **ಬೆಳಗ್ಗೆ 06:00 ಗಂಟೆಯಿಂದ 21-03-2020** ರ **ಮಧ್ಯರಾತ್ರಿಯವರೆಗೂ** ತಕ್ಷಣದಿಂದ ಜಾರಿಗೆ ಬರುವಂತೆ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ರೀತಿಯ ಕ್ಲಬ್‌ಗಳು (ಸಿಎಲ್-4 ಸನ್ನದುಗಳು), ಸ್ವತಂತ್ರ ಆರ್.ವಿ.ಬಿ ಸನ್ನದುಗಳು, (ಪಬ್‌ಗಳು) ಮುಚ್ಚಲು ಆದೇಶಿಸಿರುತ್ತೇನೆ.

ಅಬಕಾರಿ ಆಯುಕ್ತರು

**ಪ್ರತಿಯನ್ನು**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು ಇವರಿಗೆ ಮಾಹಿತಿಗಾಗಿ.
2. ಮಾನ್ಯ ಅಬಕಾರಿ ಸಚಿವರ ಆಪ್ತ ಕಾರ್ಯದರ್ಶಿಗಳು ಇವರಿಗೆ ಮಾಹಿತಿಗಾಗಿ.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
5. ಡೈರೆಕ್ಟರ್ ಜನರಲ್ & ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
7. ಪೊಲೀಸ್ ಕಮಿಷನರ್, ಬೆಂಗಳೂರು ನಗರ, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು
9. ರಾಜ್ಯ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
10. ರಾಜ್ಯದ ಎಲ್ಲಾ ಅಬಕಾರಿ ಜಂಟಿ ಆಯುಕ್ತರುಗಳು ಹಾಗೂ ಅಬಕಾರಿ ಉಪ ಆಯುಕ್ತರುಗಳಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ.
11. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಬಿ.ಸಿ.ಎಲ್, ಶಾಂತಿನಗರ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
12. ಕಛೇರಿ ಪ್ರತಿ/ಹೆಚ್ಚಿನ ಪ್ರತಿ.